ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ದಿನಾಂಕ 14.05.1970ರಂದು ಆದ ಟ್ರಸ್ ಡೀಡ್ ನ ದೃಢೀಕೃತ ನಕಲನ್ನು ನಿಪಿ-1 ಎಂದು, ಒಂದು ಡಿಮ್ಯಾಂಡ್ ರಿಜಿಸ್ಟರ್ ದೃಢೀಕೃತ ನಕಲನ್ನು ನಿಪಿ-2 ಎಂದು, 24 ಫೋಟೋಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-3 ಎಂದು, ಒಂದು ಸಿಡಿ ಅನ್ನು ನಿಪಿ-3(ಎ) ಎಂದು, ಅರ್ಚಕ ವೆಂಕಟನರಸಿಂಹಚಾರ್ ರವರ ಮರಣ ಪ್ರಮಾಣ ಪತ್ರದ ನಕಲು ಪ್ರತಿಯನ್ನು ನಿಪಿ-4 ಎಂದು, 4 ಪುಟಗಳ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಓ.ಎಸ್ 251/2007ರ ದಾವೆಯ ಆದೇಶ ಪುಟ, ತಿದ್ದುಪಡಿ ವಾದ ಪತ್ರದ, ರಾಜಿ ಪತ್ರ, ಸ್ಕೆಚ್ ಮತ್ತು ಡಿಕ್ರಿಯ ದೃಢೀಕೃತ ನಕಲುಗಳನ್ನು ಒಟ್ಟಾಗಿ ನಿಪಿ-6 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
1ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.